**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ 2014-15ನೇ ಸಾಲಿನ ನೂತನ ಯೋಜನೆಯಾದ **"ಕರ್ನಾಟಕ ಕ್ರೀಡಾ ರತ್ನ"** ಪ್ರಶಸ್ತಿಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ದಿನಾಂಕ: 21-08-2013ರಂದು ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಏಕಲವ್ಯ ಹಾಗೂ ಜೀವಮಾನ ಸಾಧನೆ ಪ್ರಶಸ್ತಿ ಆಯ್ಕೆ ಸಮಿತಿ ಸಭೆಯ ನಡವಳಿ.

2) ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ: ಡಿವೈಎಸ್/ಕ್ರೀಕಪಂ/11/2014-15, ದಿ: 12-05-2014 ಮತ್ತು 28-07-2014.

******

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ(1)ರ ನಡವಳಿಯಲ್ಲಿ, ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ಸಚಿವರು ಕರ್ನಾಟಕದಲ್ಲಿ ಗ್ರಾಮೀಣ ಕ್ರೀಡಾ ಪ್ರತಿಭೆಗಳಿಗೆ ಏಕಲವ್ಯ ಪ್ರಶಸ್ತಿ ಮಾದರಿಯಲ್ಲಿಯೇ ಪ್ರೋತ್ಸಾಹ ನೀಡುವುದು ಇಲಾಖೆಯ ಕರ್ತವ್ಯವಾಗಿರುತ್ತದೆಯೆಂದು ತಿಳಿಸಿ, ಜನಪದ ಕ್ರೀಡೆಗಳಾದ ಕಂಬಳ, ಕುಸ್ತಿ, ಆಟ್ಯಾ-ಪಾಟ್ಯ ಇತ್ಯಾದಿ ಕ್ರೀಡೆಗಳಲ್ಲಿ ಕೀರ್ತಿ ಗಳಿಸಿದವರನ್ನು ಗುರುತಿಸಿ ಪ್ರೋತ್ಸಾಹಿಸಲು ಮಾರ್ಗಸೂಚಿ ಸೂತ್ರಗಳನ್ನು ರಚಿಸಲು ಸಭಾಧ್ಯಕ್ಷರು ಪ್ರಧಾನ ಕಾರ್ಯದರ್ಶಿಯವರಿಗೆ ಸೂಚಿಸಿದ್ದು, ಅದರಂತೆ **"ಕರ್ನಾಟಕ ಕ್ರೀಡಾ ರತ್ನ"** ಪ್ರಶಸ್ತಿಯ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿರುವುದಲ್ಲದೇ ಈ ಪ್ರಶಸ್ತಿಯ ಆಯ್ಕೆಗಾಗಿ ಪರಿಶೀಲನಾ ಸಮಿತಿ ಮತ್ತು ಆಯ್ಕೆ ಸಮಿತಿ ರಚಿಸಿ ಅನುಮೋದನೆ ನೀಡುವಂತೆ ಉಲ್ಲೇಖ(2)ರ ಪತ್ರಗಳಲ್ಲಿ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಸರ್ಕಾರವನ್ನು ಕೋರಿರುತ್ತಾರೆ.

ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 270 ಯುಸೇಕ್ರೀ 2014,**

**ಬೆಂಗಳೂರು, ದಿನಾಂಕ: 13-08-2014**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ 2014-15ನೇ ಸಾಲಿನ ನೂತನ ಯೋಜನೆಯಾದ **"ಕರ್ನಾಟಕ ಕ್ರೀಡಾ ರತ್ನ"** ಪ್ರಶಸ್ತಿಯನ್ನು ಅನುಷ್ಠಾನಗೊಳಿಸಲು ಈ ಆದೇಶದ ಜೊತೆಯಲ್ಲಿ ಲಗತ್ತಿಸಿರುವ ಮಾರ್ಗಸೂಚಿ, ಷರತ್ತು ಮತ್ತು ನಿಬಂಧನೆಗಳು, ಅನುಬಂಧ-1ರಲ್ಲಿ ನಮೂದಿಸಿರುವ ಅರ್ಜಿ ನಮೂನೆ ಮತ್ತು ಅನುಬಂಧ-2ರಲ್ಲಿ ಪರಿಗಣಿಸಿರುವ 13 ಕ್ರೀಡೆಗಳನ್ನು ಅಳವಡಿಸಿಕೊಳ್ಳಲು ಅನುಮೋದನೆ ನೀಡಿ ಆದೇಶಿಸಿದೆ.

....2

ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗಾಗಿ ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಲು ಆಯುಕ್ತರು/ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ **ಪರಿಶೀಲನಾ ಸಮಿತಿ**ಯನ್ನು ಹಾಗೂ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ಆಯ್ಕೆಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ **ಆಯ್ಕೆ ಸಮಿತಿ**ಯನ್ನು ರಚಿಸಲು ಪ್ರತ್ಯೇಕವಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು.

ಈ ನೂತನ ಯೋಜನೆಯಾದ **"ಕರ್ನಾಟಕ ಕ್ರೀಡಾ ರತ್ನ"** ಪ್ರಶಸ್ತಿಯ ಅನುಷ್ಠಾನಕ್ಕಾಗಿ ಹೆಚ್ಚುವರಿ ಅನುದಾನ ಒದಗಿಸಲಾಗದು. ಇದನ್ನು ಇಲಾಖೆಗೆ ಒದಗಿಸಿರುವ ಅನುದಾನದಿಂದಲೇ ಸರಿದೂಗಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/8/14

**(ವಿ. ರಾಮಕೃಷ್ಣಯ್ಯ)**
ಸರ್ಕಾರದ ಅಧೀನ ಕಾರ್ಯದರ್ಶಿ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
3) ಉಪ ನಿರ್ದೇಶಕರು, ಟಿಏಸ್‌ಎಂಸಿ., ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
4) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬ.ಮ.ಕಟ್ಟಡ, ಬೆಂಗಳೂರು.
6) ಸರ್ಕಾರದ ಅಧೀನ ಕಾರ್ಯದರ್ಶಿ,ಆರ್ಥಿಕ ಇಲಾಖೆ (ವೆಚ್ಚ-7),ವಿಧಾನಸೌಧ, ಬೆಂಗಳೂರು
7) ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9) ಸರ್ಕಾರದ ಉಪ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಪ್ತ ಸಹಾಯಕಿ
10) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.